## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1088(1156)
ಮಾನ್ಯ ಸದಸ್ಯರ ಹೆಸರು : ಶ್ರೀ ಎಸ್. ರವಿ(ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 19.12.2024
ಉತ್ತರಿಸುವವರು : ಮುಖ್ಯಮಂತ್ರಿಯವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ನಿರುದ್ಯೋಗದ ಸಮಸ್ಯೆ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು. |
| ಆ) | ಉನ್ನತ ವ್ಯಾಸಂಗ ಮಾಡಿ, ಅತ್ಯುನ್ನತ ಕೌಶಲ್ಯಗಳನ್ನೊಳಗೊಂಡ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಯಾವುದೇ ಸೌಲಭ್ಯಗಳನ್ನು ಪಡೆಯದೆ, ಕಡಿಮೆ ವೇತನಕ್ಕೆ ದುಡಿಯುತ್ತಿರುವುದು ನಿಜವಲ್ಲವೇ; | ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳಿಗೆ ನಿಯಮಾನುಸಾರ ಕಾರ್ಮಿಕ ಇಲಾಖೆಯ ಕನಿಷ್ಠ ವೇತನ ಕಾಯ್ದೆಯನ್ವಯ ವೇತನ ಪಾವತಿಸಲಾಗುತ್ತಿದೆ. ಹಾಗೇಯೇ ಪಿಎಫ್ ಮತ್ತು ಇಎಸ್ಐ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. |
| ಇ) | ನಿಜವಾಗಿದ್ದಲ್ಲಿ, ಸರ್ಕಾರವೇ ನಿವೃತ್ತಿಗೆ ವಯೋಮಿತಿ ನಿಗದಿಪಡಿಸಿದ್ದರೂ ಸಹ ವಯಸ್ಸಾದ ನಿವೃತ್ತ ಸರ್ಕಾರಿ ನೌಕರರನ್ನು ಪುನಃ ಗುತ್ತಿಗೆ / ಹೊರಗುತ್ತಿಗೆ ಆಧಾರದ ಮೇಲೆ ಇಲಾಖೆಗಳಿಗೆ, ನಿಗಮ ಮಂಡಳಿಗಳಿಗೆ ನೇಮಿಸುವುದರಿಂದ ಸರ್ಕಾರದ ಪಿಂಚಣಿಯ ಜೊತೆಗೆ ವೇತನ, ಇತರೆ ಭತ್ಯೆಗಳು ಹಾಗೂ ನೀಡುತ್ತಿರುವ ಎಲ್ಲಾ ಸೌಲಭ್ಯಗಳಿಂದ ಸರ್ಕಾರದ ಬೊಕ್ಕಸಕ್ಕೆ ಆರ್ಥಿಕ ನಷ್ಟ ಉಂಟಾಗುತ್ತಿಲ್ಲವೇ; | ದಿನಾಂಕ:23.12.1994ರ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 15 ಎಸ್‌ಡಿಇ 1994ರನ್ವಯ ಮತ್ತು ದಿನಾಂಕ:29.02.2016ರ ಸುತ್ತೋಲೆ ಸಂಖ್ಯೆ: ಸಿಆಸುಇ 588 ಸೇನೆನಿ 2015ರನ್ವಯ, ನಿವೃತ್ತಿ ಹೊಂದಿದ ನೌಕರರನ್ನು ಪುನರ್ ನೇಮಕ ಮಾಡುವಂತಿಲ್ಲ ಎಂಬುದು ಸರ್ಕಾರದ ನೀತಿಯಾಗಿರುತ್ತದೆ. ಆದರೆ ಈ ಕೆಳಕಂಡ 2 ಪ್ರಕರಣಗಳಿಗೆ ಈ ಸೂಚನೆಗಳು ಅನ್ವಯವಾಗುವುದಿಲ್ಲ.<br><br>(ಎ) ಮಾನ್ಯ ಮುಖ್ಯಮಂತ್ರಿಯವರು, ಮಾನ್ಯ ಸಚಿವರುಗಳ ಆಪ್ತ ಶಾಖೆಗೆ ನಿವೃತ್ತಿ ನೌಕರರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲಾಗುವ ಪ್ರಕರಣಗಳಲ್ಲಿ ;<br><br>(ಬಿ) ಸಚಿವ ಸಂಪುಟದ ಅನುಮೋದನೆ ಪಡೆದು ನಿವೃತ್ತಿ ನೌಕರರನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲಾಗುವ ಪ್ರಕರಣಗಳಲ್ಲಿ.<br><br>ಮಾನ್ಯ ಮುಖ್ಯಮಂತ್ರಿಯವರ / ಮಾನ್ಯ ಸಚಿವರುಗಳ ಆಪ್ತ ಶಾಖೆಗಳ ಹುದ್ದೆಗಳು ತಾತ್ಕಾಲಿಕ ಹುದ್ದೆಗಳಾಗಿದ್ದು, ಸಚಿವರುಗಳ ಪದಾವಧಿಯವರೆಗೆ ಸದರಿ ಹುದ್ದೆಗಳಲ್ಲಿ ನಿವೃತ್ತ ಅಧಿಕಾರಿ / ನೌಕರರನ್ನು ಮರು ನೇಮಿಸಲಾಗುತ್ತಿದೆ. ನಿವೃತ್ತ ಅಧಿಕಾರಿ / ನೌಕರರ ಸೇವಾ ಅನುಭವ ಹಾಗೂ ಕೌಶಲ್ಯ ಇವುಗಳ ಆಧಾರದ ಮೇಲೆ ಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲಾಗಿದ್ದು, ಇದರಿಂದ ಸರ್ಕಾರದ ಬೊಕ್ಕಸಕ್ಕೆ ಹೆಚ್ಚಿನ ಹೊರೆಯಾಗುವುದಿಲ್ಲ. |
| ಈ) | ಹಾಗಿದ್ದಲ್ಲಿ, ಈ ಆರ್ಥಿಕ ನಷ್ಟವನ್ನು ಸರಿದೂಗಿಸಲು ಹಾಗೂ ನಿವೃತ್ತ ಸರ್ಕಾರಿ ಅಧಿಕಾರಿ / ನೌಕರರನ್ನು ಕೂಡಲೇ ಕರ್ತವ್ಯದಿಂದ ಬಿಡುಗಡೆಗೊಳಿಸುವ ಕುರಿತು ಸರ್ಕಾರದ ನಿಲುವೇನು? (ಮಾಹಿತಿ ನೀಡುವುದು) | |

**ಕಡತ ಸಂಖ್ಯೆ: ಸಿಆಸುಇ 256 ರಾಸ 2024.**

(ಸಿದ್ದರಾಮಯ್ಯ)
ಮುಖ್ಯಮಂತ್ರಿ